ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

1

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಪಾಲ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 24/10/20

# ಬಿ-ಖರಾಬು ಜಮೀನು ಸಕ್ರಮಕ್ಕೆ ಒಪ್ಪಿಗೆ

## ರಾಜ್ಯಪಾಲರಿಂದ ವಿಧೇಯಕಕ್ಕೆ ಅಂಕಿತ

**ಬೆಂಗಳೂರು:** ಬೆಂಗಳೂರು ಸೇರಿದಂತೆ ರಾಜ್ಯದ ನಗರ ಪ್ರದೇಶದಲ್ಲಿನ ಬಿ- ಖರಾಬು ಭೂಮಿಯನ್ನು ಸಕ್ರಮಗೊಳಿಸಿ ದುಪ್ಪಟ್ಟು ದರಕ್ಕೆ ಮಾರಾಟ ಮಾಡುವ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕಕ್ಕೆ ರಾಜ್ಯಪಾಲ ವಿ.ಆರ್.ವಾಲಾ ಅವರು ಅಂಕಿತ ಹಾಕಿದ್ದಾರೆ.

ಕಳೆದ ತಿಂಗಳು ನಡೆದ ಅಧಿವೇಶನದಲ್ಲಿ ವಿಧೇಯಕವನ್ನು ಅಂಗೀಕರಿಸಲಾಗಿತ್ತು. ಅಂಗೀಕರಿಸಲ್ಪಟ್ಟ ವಿಧೇಯಕವನ್ನು ರಾಜ್ಯ ಸರ್ಕಾರವು ರಾಜ್ಯಪಾಲರ ಸಹಿಗಾಗಿ ಕಳುಹಿಸಿಕೊಟ್ಟಿತ್ತು. ಇದೀಗ ರಾಜ್ಯಪಾಲರು ಅಂಕಿತ ಹಾಕಿದ್ದು, ವಿಧೇಯಕವು ಕಾಯ್ದೆಯಾಗಿ ರೂಪುಗೊಂಡಂತಾಗಿದೆ. ಖಾಸಗಿ ನಿವೇಶನ ನಡುವೆ ಸಿಲುಕಿರುವ ಸರ್ಕಾರಿ ಜಮೀನನ್ನು ಬಳಸಿಕೊಳ್ಳಲು ಸಾಧ್ಯವಾಗದಿರುವ ಹಿನ್ನೆಲೆಯಲ್ಲಿ ಮಾರಾಟ ಮಾಡಲು ನಿರ್ಧರಿಸಲಾಗಿದೆ. ಮಾರ್ಗಸೂಚಿಯ ದರಕ್ಕೆ ಎರಡು ಪಟ್ಟು ದರ ನಿಗದಿ ಮಾಡಿ ಮಾರಾಟ ಮಾಡಬಹುದಾಗಿದೆ.

ರಾಜ್ಯದ ನಗರ ಪ್ರದೇಶನದಲ್ಲಿ ಮತ್ತು ಬಿಬಿಎಂಪಿ ವ್ಯಾಪ್ತಿಯ 18 ಕಿ.ಮೀ.ವರೆಗಿನ ಮತ್ತು ಇತರೆ ನಗರ ಪಾಲಿಕೆ ವ್ಯಾಪ್ತಿಯ 5 ಕಿ.ಮೀ.ವರೆಗಿನ ಖರಾಬು ಭೂಮಿಯನ್ನು ಮಾರಾಟ ಮಾಡಬಹುದು. ವಿಧೇಯಕ ಪ್ರಾರಂಭಕ್ಕೆ ಮೊದಲು ಸೊಸೈಟಿಗಳಿಗೆ, ಧಾರ್ಮಿಕ ಸಂಸ್ಥೆಗಳಿಗೆ, ಶೈಕ್ಷಣಿಕ ಸಂಸ್ಥೆಗಳಿಗೆ, ಇತರೆ ಉದ್ದೇಶಗಳಿಗೆ 15 ವರ್ಷಗಿಂತ ಮೊದಲು ಗುತ್ತಿಗೆ ನೀಡಿದ ಸರ್ಕಾರಿ ಭೂಮಿಗಳ ಮಂಜೂರಾತಿಯನ್ನು ಸರ್ಕಾರಕ್ಕೆ ಅಗತ್ಯ ಇಲ್ಲ ಖಚಿತಪಡಿಸಿಕೊಂಡ ಬಳಿಕ ಮಾರಾಟ ಮಾಡಲಾಗುತ್ತದೆ.